# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು -572103

ಸಂಖ್ಯೆ:ತುವಿ:ಶೈವಿ:UG:2025-26: 972 ದಿನಾಂಕ:15.07.2025

## ಸುತ್ತೋಲೆ

ವಿಷಯ:-2024-25ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆ-1 ಹಾಗೂ 2 ಮತ್ತು 3ರ (Supplementory Exam) ಪರೀಕ್ಷೆಗಳಲ್ಲಿ ಉತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ದಂಡ ವಿಧಿಸದೇ ಸ್ನಾತಕ ಪದವಿ ಕೋರ್ಸುಗಳಿಗೆ ಪ್ರವೇಶಾತಿ ಕಲ್ಪಿಸುವ ಕುರಿತು.

ಉಲ್ಲೇಖ:-1) ಕರ್ನಾಟಕ ಸರ್ಕಾರದ ಸಚಿವಾಲಯ ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯ-1) ಬೆಂಗಳೂರು ಇವರ ಪತ್ರದ ಸಂಖ್ಯೆ:ಇಡಿ 216 ಯುಎನ್‌ಇ 2025 ದಿನಾಂಕ:30.06.2025.

2) ವಿಶ್ವವಿದ್ಯಾನಿಲಯದ ಸುತ್ತೋಲೆ ಪತ್ರದ ಸಂಖ್ಯೆ: ತು.ವಿ: ಶೈ.ವಿ: UG:2025-26/ 381 ದಿನಾಂಕ:16.05.2025

3) ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ:15.07.2025.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೆಖ (01)ರ ಪತ್ರವನ್ನು ಓದಲಾಗಿ ತುಮಕೂರು ವಿಶ್ವವಿದ್ಯಾನಿಲಯ ಸಂಯೋಜಿತ/ ಘಟಕ/ ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ತಿಳಿಯಪಡಿಸುವುದೇನೆಂದರೆ, 2024-25ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆ-1, 2 ಮತ್ತು 3 ರಲ್ಲಿ (Supplementary Exam) ಉತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ಈ ಕೆಳಕಂಡ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

1. 2024-25ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆ-1 ಹಾಗೂ 2ರ (Supplementary Exam) ಪರೀಕ್ಷೆಗಳಲ್ಲಿ ಉತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ಹಾಗೂ ಪರೀಕ್ಷೆ-3ರಲ್ಲಿ ತೇರ್ಗಡೆಗೊಳ್ಳುವ ವಿದ್ಯಾರ್ಥಿಗಳಿಗೆ ಪದವಿ ಕೋರ್ಸುಗಳ ಪ್ರವೇಶಾತಿಗೆ ದಂಡ ವಿಧಿಸದೇ ಪ್ರಸ್ತುತ ವಿಶ್ವವಿದ್ಯಾನಿಲಯವು ನಿಗಧಿಪಡಿಸಿರುವ ಕನಿಷ್ಠ ಪ್ರವೇಶಾತಿ ಶುಲ್ಕವನ್ನು ಮಾತ್ರ ಪಡೆಯತಕ್ಕದ್ದು ಮತ್ತು ಇಂತಹ ವಿದ್ಯಾರ್ಥಿಗಳಿಗೆ ದಿನಾಂಕ:30.08.2025ರ ವರೆಗೆ ಪ್ರವೇಶಾತಿಯನ್ನು ಕಲ್ಪಿಸುವುದು.
2. ಇಂತಹ ವಿದ್ಯಾರ್ಥಿಗಳಿಗೆ ಪಾಠ ಪ್ರವಚನವನ್ನು ಯಾವುದೇ ಹೆಚ್ಚುವರಿ ಶುಲ್ಕವನ್ನು ವಿಧಿಸದೇ Bridge Course ಮೂಲಕ ತರಗತಿಗಳನ್ನು ನಡೆಸಲು ವಿಶ್ವವಿದ್ಯಾನಿಲಯಗಳು ಕ್ರಮವಹಿಸತಕ್ಕದ್ದು.

ಮುಂದುವರೆದಂತೆ, ಉಲ್ಲೇಖ (02)ರಲ್ಲಿ ಈಗಾಗಲೇ ವಿಶ್ವವಿದ್ಯಾನಿಲಯದಿಂದ ಹೊರಡಿಸಿರುವ ಸುತ್ತೋಲೆಯಲ್ಲಿ ಇನ್ನುಳಿದ ವಿದ್ಯಾರ್ಥಿಗಳಿಗೆ ಯಾವುದೇ ಬದಲಾವಣೆ (ಪಿಯುಸಿ Supplementary Exam ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳ ಹೊರತುಪಡಿಸಿ) ಇರುವುದಿಲ್ಲವೆಂದು ಉಲ್ಲೇಖ (03)ರಲ್ಲಿ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ ಈ ಮೂಲಕ ತಿಳಿಸಲಾಗಿದೆ.

ವಿ.ಸೂ: ವಿಶ್ವವಿದ್ಯಾನಿಲಯಕ್ಕೆ ಪ್ರವೇಶಾನುಮೋದನೆಗೆ ಸಲ್ಲಿಸುವ ಪಟ್ಟಿಯಲ್ಲಿ ದಂಡ ಶುಲ್ಕ ಪಾವತಿಸದೆ ವಿನಾಯಿತಿ ಪಡೆದಿರುವ ವಿದ್ಯಾರ್ಥಿಗಳ ಮಾಹಿತಿಯನ್ನು **Month & year of passing & Date of Admission** ಕಾಲಂನಲ್ಲಿ ಸ್ಪಷ್ಟವಾಗಿ ದಾಖಲಿಸತಕ್ಕದ್ದು. ತಪ್ಪಿದ್ದಲ್ಲಿ ವಿಶ್ವವಿದ್ಯಾನಿಲಯದ ನಿಯಮಾನುಸಾರ ಕ್ರಮ ವಹಿಸಲಾಗುವುದು.

ಆದೇಶದ ಮೇರೆಗೆ,

ಉಪಕುಲಸಚಿವರು

ಉಪಕುಲಸಚಿವರು 17/7
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ

1. ಪ್ರಾಂಶುಪಾಲರುಗಳು ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರುಗಳು ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು - ವೆಬ್‌ಸೈಟ್‌ನಲ್ಲಿ ಇಂದೇ ಪ್ರಕಟಿಸುವುದು, ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಇ-ಮೇಲ್ ಕಳುಹಿಸುವುದು.

ಪ್ರತಿಗಳು:

1. ಕುಲಸಚಿವರು (ಮೌಲ್ಯಮಾಪನ) ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಚೇರಿ ಪ್ರತಿ.